ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕೊಡಗು ಜಿಲ್ಲೆಯ ಮಕ್ಕಂದೂರು-ತಂತಿಪಾಲ-ಮುಕ್ಕೋಡ್ಲು ಸಂಪರ್ಕ ರಸ್ತೆ ದುರಸ್ತಿ ಮಾಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

705 (687) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕಿನ ಮಕ್ಕಂದೂರು -ತಂತಿಪಾಲ-ಮುಕ್ಕೋಡ್ಲು ಸಂಪರ್ಕ ರಸ್ತೆ ಸಂಪೂರ್ಣ ಹಾಳಾಗಿದ್ದು ಗ್ರಾಮಾಸ್ಥರು ಹಾಗೂ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 2016-17 ರಿಂದ ಇಲ್ಲಿಯವರೆಗೆ ಸದರಿ ರಸ್ತೆಯ ದುರಸ್ತಿ/ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಖರ್ಚು ಮಾಡಲಾಗಿದೆ; (ವರ್ಷವಾರು ಹಾಗೂ ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲೇ ಸಂಪೂರ್ಣವಾಗಿ ಹಾಳಾಗಿರುವ ಸದರಿ ರಸ್ತೆಯನ್ನು ದುರಸ್ತಿ/ಅಭಿವೃದ್ಧಿಪಡಿಸಲಾಗುವುದೇ ?